ಗುತ್ತಿಗೆದಾರರಿಗೆ ನೀಡಲಾಗಿದ್ದು ಗುತ್ತಿಗೆದಾರರು ಪಂಪಿಂಗ್ ಮಿಷಿನರಿಗಳನ್ನು ಪಡೆಯಲು ಸರಬರಾಜು ಆದೇಶ ನೀಡಿರುತ್ತಾರೆ.

ಮುಳಗಡೆ ಗ್ರಾಮದ ಶಾಲೆಗಳ ದುಃಸ್ಥಿತಿ

239 (179) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬರಾವ್ (ಜಮಖಂಡಿ). :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕೃಷ್ಣಾ ನದಿಯ 519.6 ಮೀ ಹಿನ್ನೀರಿನಿಂದ ಮುಳುಗಡೆಯಾದ ಜಮಖಂಡಿ ತಾಲ್ಲೂಕಿನ ಗ್ರಾಮಗಳಲ್ಲಿಯ ಪ್ರಾಥಮಿಕ ಶಾಲೆಗಳ ದುಃಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಅ) ಅನೇಕ ಶಾಲೆಗಳು ಸಂಪೂರ್ಣ ಕುಸಿದುಹೋಗಿದ್ದು ಜೀವಹಾನಿಯಾಗಬಹುದಾದ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಈ ಗ್ರಾಮಗಳ ಶಾಲೆಯ ರಿಪೇರಿ ಹಾಗೂ ಅಗತ್ಯವಾದ ಹೊಸ ಕೊಠಡಿಗಳನ್ನು ಯಾವಾಗ ನಿರ್ಮಿಸಲಾಗುವುದು ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಬಂದಿದೆ. ಕೃಷ್ಣಾ ನದಿ ಯೋಜನೆಯ ಹಿನ್ನೀರಿನಿಂದ ಜಮಖಂಡಿ ತಾಲ್ಲೂಕಿನ 15 ಗ್ರಾಮಗಳು ಮುಳಗಡೆ ವ್ಯಾಪ್ತಿಯಲ್ಲಿ ಬರುತ್ತಿದ್ದು, ಸದರಿ ಗ್ರಾಮಗಳಲ್ಲಿ ಶಾಶ್ವತ ಕಾಮಗಾರಿಗಳನ್ನು ಕೈಗೊಳ್ಳದಂತೆ ಮಾನ್ಯ ಘನ ಸರ್ಕಾರದ ನಿರ್ದೇಶನವಿರುದರಿಂದ ಶಾಶ್ವತ ಕಾಮಗಾರಿಗಳನ್ನು ಕೈಗೊಂಡಿರುವುದಿಲ್ಲ.

ಆ) ಬಂದಿದೆ. ಆದರೆ ಪುನರ್ ವಸತಿ ಕೇಂದ್ರಗಳಲ್ಲಿನ ಹೊಸ ಕಟ್ಟಡಗಳಿಗೆ ಶಾಲೆಗಳನ್ನು ಸ್ಥಳಾಂತರಿಸಲು ಗ್ರಾಮದ ಜನ ಸಮುದಾಯವನ್ನು ಪದೆ ಪದೆ ವಿನಂತಿಸಿದಾಗ್ಯೂ ಕೂಡಾ ಗ್ರಾಮಸ್ಥರು ಮತ್ತು ಎಸ್.ಡಿ.ಎಂ.ಸಿ.ಯವರು ಅಲ್ಲಿಗೆ ಮಕ್ಕಳನ್ನು ಕಳುಹಿಸಲು ಸಿದ್ದರಿಲ್ಲದಿರುವುದರಿಂದ ಸದ್ಯಕ್ಕೆ ಅದೇ ಗ್ರಾಮದಲ್ಲಿ ಹಳೆ ಶಾಲಾ ಕಟ್ಟಡದಲ್ಲಿ ಶಾಲೆಗಳು ನಡೆಯುತ್ತಿವೆ.

ಇ) ಮುಳಗಡೆ ಗ್ರಾಮಗಳ ಪುನರ್ ವಸತಿ ಕೇಂದ್ರಗಳಲ್ಲಿ ಹೊಸ ಕಟ್ಟಡವಿದ್ದು, ಸದರಿ ಶಾಲಾ ಕಟ್ಟಡಗಳಿಗೆ ಮಕ್ಕಳನ್ನು ಸ್ಥಳಾಂತರಿಸಲು ಹಾಗೂ ಸಂಬಂಧಿಸಿದವರ

ಮನವೊಲಿಸಲು ಸತತ ಪ್ರಯತ್ನ ಮಾಡಲಾಗುತ್ತಿದೆ. ಗ್ರಾಮಸ್ಥರ ಸಹಕಾರ ಸಿಗದಿರುವ ಕಾರಣ ವಸ್ತುಸ್ಥಿತಿ ಆಧಾರದ ಮೇಲೆ ಕ್ರಮವಹಿಸಲಾಗುತ್ತಿದೆ.

ಮಜಲಟ್ಟಿ ಗ್ರಾಮದಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯ

189 (871) ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಚಿಕ್ಕೋಡಿ ತಾಲ್ಲೂಕಿನ ರಾಯಭಾಗ ವಿಧಾನಸಭಾ ಕ್ಷೇತ್ರದ ಮಜಲಟ್ಟಿ ಗ್ರಾಮದಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಬಂದಿದ್ದಲ್ಲಿ ಪ್ರಸ್ತಾವನೆಯ ಬಗ್ಗೆ ಸರ್ಕಾರ ತೆಗೆದಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು) :

ಅ) ಇದೆ.

ಆ) ಈಗಾಗಲೇ ನೂತನವಾಗಿ ಪ್ರಾರಂಭಿಸಲಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮೂಲಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು ನಂತರ ನಿವೇಶನದ ಲಭ್ಯತೆ, ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಅನುದಾನದ ಲಭ್ಯತೆಯನುಸಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಸರಕಾರಿ ಶಾಲೆಗಳಿಗೆ ಸ್ವಂತ ಕಟ್ಟಡ

261 (901) ಶ್ರೀ ನರೇಂದ್ರ ಬಾಬು ನೆ.ಲ (ಮಹಾಲಕ್ಷ್ಮೀ ಲೇಔಟ್):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಹಾಲಕ್ಷ್ಮೀ ಬಡಾವಾಣೆ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಮಹಾತ್ಮಾ ಗಾಂಧಿ ನಗರದಲ್ಲಿರುವ ಸರ್ಕಾರಿ ಶಾಲೆಗೆ ಸ್ವಂತ ಕಟ್ಟಡ ನಿರ್ಮಿಸಲು ನಿವೇಶನದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಕ್ಷೇತ್ರದಲ್ಲಿರುವ ಎಷ್ಟು ಸರ್ಕಾರಿ ಶಾಲೆಗಳಿಗೆ ಸ್ವಂತ ಕಟ್ಟಡ ಇದೆ (ವಿವರ ಒದಗಿಸುವುದು);

ಇ) ಸರ್ಕಾರಿ ರೈಟ್–ಟು–ಎಜುಕ್ಷೇನ್ ಕಾಯಿದೆಯನ್ನು ತಂದಿದ್ದರೂ